(0.52 ಎಕರೆ) 1 ಎಕರೆಗೆ ವಾರ್ಷಿಕ ರೂ.1000.00ರಂತೆ

ದ.ಕನ್ನಡ ಜಿಲ್ಲೆಯಲ್ಲಿ ಪಶುವೈದ್ಯಕೀಯ ಸಹಾಯಕರ ನೇಮಕ

1883 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ದಕ್ಷಿಣ ಕನ್ನಡ ಜಿಲ್ಲೆಗೆ ಮಂಜೂರಾಗಿರುವ ಪಶುವೈದ್ಯಕೀಯ ಸಹಾಯಕರ ಹುದ್ದೆಗಳ ಸಂಖ್ಯೆ ಎಷ್ಟು?*

ಆ) *ಈಗ ಭರ್ತಿ ಮಾಡಲಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು?*

ಇ) *ಈಗ ಖಾಲಿ ಇರುವ ಹುದ್ದೆಗಳ ಸಂಖ್ಯೆ : ಎಷ್ಟು*

ಈ) *ದಕ್ಷಿಣ ಕನ್ನಡ ಜಿಲ್ಲೆಯ ಪಶುವೈದ್ಯಕೀಯ ತರಬೇತಿ ಕೇಂದ್ರವನ್ನು ಮಳವಳ್ಳಿಗೆ ಸ್ಥಳಾಂತರಗೊಳ್ಳಲು ಕಾರಣಗಳು ಏನು?*

ಉ) *ಪಶುವೈದ್ಯಕೀಯ ತರಬೇತಿ ಕೇಂದ್ರವನ್ನು ದಕ್ಷಿಣ ಕನ್ನಡ ಜಿಲ್ಲೆಯ ಕ್ಯೊಲಾಗೆ ಸ್ಥಳಾಂತರಿಸುವ ಆಲೋಚನೆ ಸರ್ಕಾರದ ಮುಂದಿದೆಯೇ?*

ಊ) *ಹಾಗಿದ್ದಲ್ಲಿ ಯಾವಾಗ ಸ್ಥಳಾಂತರಿಸಲಾಗುವುದು?*

ಶ್ರೀ ಬಿ.ಎನ್. ಬಚ್ಚೇಗೌಡ (ಪಶು ಸಂಗೋಪನಾ ರಾಜ್ಯ ಸಚಿವರು) :

ಅ) 157.

ಆ) 32.

ಇ) 125

ಈ) 1)ಕೇಂದ್ರವನ್ನು ಮಳವಳ್ಳಿಗೆ ಸ್ಥಳಾಂತರಿಸುವುದರಿಂದ ಮೈಸೂರು ವಿಭಾಗದ ಜಿಲ್ಲೆಗಳಲ್ಲಿನ ರೈತರಿಗೆ ಹಾಗೂ ಮಹಿಳೆಯರಿಗೆ ಅನುಕೂಲವಾಗುವ ದೃಷ್ಟಿಯಿಂದ

2) ಮಳವಳ್ಳಿಯಲ್ಲಿ ಈ ಕೇಂದ್ರಕ್ಕೆ ಸೂಕ್ತ ಕಟ್ಟಡದ ಲಭ್ಯತೆ ಇದ್ದುದರಿಂದ.

ಉ) ಒಂದು ಪಶುವೈದ್ಯಕೀಯ ತರಬೇತಿ ಕೇಂದ್ರವು ಕ್ಯೊಲಾದಲ್ಲಿ ಕಾರ್ಯ ನಿರ್ವಹಿಸುತ್ತಿರುವುದರಿಂದ ಸ್ಥಳಾಂತರಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಊ) ಉದ್ಭವಿಸುವುದಿಲ್ಲ.

ಪಶುವೈದ್ಯ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರುಗಳ ಹುದ್ದೆ

1882 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಪಶು ಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದ ಪಶುವೈದ್ಯ ಇಲಾಖೆಯಲ್ಲಿ ಖಾಲಿ ಇರುವ ಹಿರಿಯ ಸಹಾಯಕ ನಿರ್ದೇಶಕರುಗಳ ಹುದ್ದೆ ಸಂಖ್ಯೆ ಎಷ್ಟು?*

ಆ) *ಹಿರಿಯ ಸಹಾಯಕ ನಿರ್ದೇಶಕರುಗಳ ಹುದ್ದೆಯನ್ನು ಸೃಷ್ಟಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?*

ಇ) *ಹಾಗಿದ್ದಲ್ಲಿ, ಎಷ್ಟು ಹುದ್ದೆಯನ್ನು ಸೃಷ್ಟಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ?*

ಈ) *ಯಾವಾಗ ಈ ಹುದ್ದೆಯನ್ನು ಮಂಜೂರು ಮಾಡಲಾಗುವುದು?*

ಉ) *ಹಿರಿಯ ಸಹಾಯಕ ನಿರ್ದೇಶಕರುಗಳ ಹುದ್ದೆ : ಮಂಜೂರಾದಲ್ಲಿ ಪಶುವೈದ್ಯಾಧಿಕಾರಿಗಳಿಗೆ ಮತ್ತು ಸಹಾಯಕ ನಿರ್ದೇಶಕರುಗಳಿಗೆ ಬಡ್ತಿ ನೀಡುವ ಸಾಧ್ಯತೆ ಇದೆಯೇ?*

ಶ್ರೀ ಬಿ.ಎನ್. ಬಚ್ಚೇಗೌಡ (ಪಶು ಸಂಗೋಪನಾ ರಾಜ್ಯ ಸಚಿವರು) :

ಅ) ಇಲ್ಲ

ಆ) ಇದೆ

ಇ) 200

ಈ) ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ

ಉ) ಇದೆ.

ಲೋಕೋಪಯೋಗಿ ಇಲಾಖೆಯ ವಸತಿ ಗೃಹಗಳಿಗೆ ಸುಣ್ಣ ಬಣ್ಣ ಬಳಿಸದೇ ಇರುವುದು.

2423 - ಶ್ರೀ ಬಿ. ಶಿವರಾಮು (ಗಂಡಸಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದ ಲಾಲ್‌ಬಾಗ್ ಸಿದ್ದಾಪುರದಲ್ಲಿರುವ ಲೋಕೋಪಯೋಗಿ ಇಲಾಖೆಯ ವಸತಿಗೃಹಗಳಲ್ಲಿ ಸಂಪೂರ್ಣವಾಗಿ ಸುಣ್ಣ ಬಣ್ಣ ಬಳಿಸದೇ ಸುಮಾರು ವರ್ಷಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಸದರಿ ಕಾರ್ಯಕ್ಕಾಗಿ ತಯಾರಿಸಿದ ಅಂದಾಜು ವೆಚ್ಚವೆಷ್ಟು ಹಾಗೂ ಯಾವಾಗ ಸದರಿ ಕಾರ್ಯವನ್ನು ಕೈಗೊಳ್ಳಲಾಗುವುದು?

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ.

ಆ) ಸದರಿ ವಸತಿಗೃಹಗಳ ಸುಣ್ಣ ಬಣ್ಣ ಹಾಗೂ ದುರಸ್ತಿಗಾಗಿ 2.40 ಲಕ್ಷ ರೂ.ಗಳು ಬೇಕಾಗುತ್ತದೆ. ಈ ಸ್ಥಳದಲ್ಲಿರುವ ಎಲ್ಲಾ ವಸತಿಗೃಹಗಳ ಮಾರ್ಷಿಕ ನಿರ್ವಹಣೆಗಾಗಿ 40,000 ಅನುದಾನ ನಿಗದಿಪಡಿಸಲಾಗಿದೆ. ಆದ್ದರಿಂದ ಅನುದಾನದ ಲಭ್ಯತೆಯನ್ನು ಆಧರಿಸಿ ಆದ್ಯತೆಯ ಮೇಲೆ ಸುಣ್ಣ ಬಣ್ಣ ಕಾಮಗಾರಿಗಳನ್ನು ಕೈಗೊಳ್ಳಲು ಪರಿಶೀಲಿಸಲಾಗುವುದು.

ಲಾಲ್‌ಬಾಗ್ ಸಿದ್ದಾಪುರದಲ್ಲಿರುವ ಲೋಕೋಪಯೋಗಿ ಇಲಾಖೆಯ ವಸತಿ ಗೃಹಗಳು

2422 - ಶ್ರೀ ಬಿ. ಶಿವರಾಮು (ಗಂಡಸಿ) : ಮಾನ್ಯ ಲೋಕೋಪಯೋಗಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿರುವ ಲಾಲ್‌ಬಾಗ್ -ಸಿದ್ದಾಪುರದಲ್ಲಿರುವ ಲೋಕೋಪಯೋಗಿ ಇಲಾಖೆಯ ವಸತಿ ಗೃಹಗಳಲ್ಲಿ ಬ್ಲಾಕ್ ನಂ3 ಹಾಗೂ 2-1 ರಲ್ಲಿ ಕಾಂಪೌಂಡ್‌ಗಳ ಬಾಗಿಲುಗಳು ಮುರಿದು ಹೋಗಿರುವುದು ಹಾಗೂ ಅಲ್ಲಿನ ಆಂಗಳವು ಸಮತಳವಾಗಿಲ್ಲದೆ ಇರುವುದರಿಂದ ನಿವಾಸಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ.

ಆ) ಹಾಗಿದ್ದಲ್ಲಿ ಕೂಡಲೇ ಸದರಿ ಗೇಟ್ಗಳನ್ನು ಹಾಗೂ ಆವರಣವನ್ನು ಸಮತಳ ಮಾಡಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ.

ಆ) ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲಾಗುವುದು.